ಅ) ಮಂಡ್ಯ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಶಿಕ್ಷಕರ ಕೊರತೆ ನೀಗಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

ಇ) ಮಂಡ್ಯ ಉತ್ತರ ವಲಯದಲ್ಲಿ ಮಂಜೂರಾದ ಶಿಕ್ಷಕರ ಹುದ್ದೆಗಳಿಗೆ ಎದುರಾಗಿ ಹುದ್ದೆಗಳು ಖಾಲಿ ಇರುವುದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ವಿಶ್ವೇಶ್ವರ ಹೆಗೆಡೆ ಕಾಗೇರಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಹೌದು

ಆ) ಪ್ರೌಢ ಶಾಲಾ ಶಿಕ್ಷಕರಿಗೆ ಸಂಬಂಧಿಸಿದಂತೆ ನೇಮಕಾತಿ ಅಧಿಸೂಚನೆಯನ್ನು ಹೊರಡಿಸಿದ್ದು, ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆ ಭರ್ತಿಗೆ ಅನುಮತಿಸಲು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಿದ್ದು, ಸಹಮತಿ ದೊರೆತ ತಕ್ಷಣ ಕ್ರಮವಹಿಸಲಾಗುವುದು. ಶಾಲೆಗಳಲ್ಲಿ ಶಿಕ್ಷಕರ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ಅತಿಥಿ ಶಿಕ್ಷಕರನ್ನು ನೇಮಿಸಿ ಕೊಳ್ಳಲು ಆರ್ಥಿಕ ಇಲಾಖೆಯ ಅನುಮತಿ ಕೋರಿದ್ದು ದೊರೆತ ತಕ್ಷಣ ಕ್ರಮವಹಿಸಲಾಗುವುದು.

ಇ) ಮೇಲಿನಂತೆ

ಭಾಗ್ಯಲಕ್ಷ್ಮಿ ಬಾಂಡ್ ಯೋಜನೆ

204 (420) ಶ್ರೀ ಬಂಡೆಪ್ಪ ಕಾಶೆಂಪೂರ್ (ಬೀದರ್ ದಕ್ಷಿಣ) :– ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಬೀದರ್ ಜಿಲ್ಲೆಯಲ್ಲಿ ಭಾಗ್ಯಲಕ್ಷ್ಮಿ ಬಾಂಡ್ ಯೋಜನೆಯಡಿಯಲ್ಲಿ ನೀಡಬೇಕಾಗಿರುವ ಬಾಂಡ್‌ಗಳ ಸಂಖ್ಯೆ ಎಷ್ಟು ; (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

ಆ) ಬಾಕಿ ಇರುವ ಬಾಂಡ್‌ಗಳನ್ನು ಯಾವಾಗ ವಿತರಿಸಲಾಗುವುದು;

ಇ) ಈ ಬಾಂಡ್‌ಗಳ ವಿತರಣೆಯ ವಿಳಂಬಕ್ಕೆ ಕಾರಣಗಳೇನು;

ಈ) ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಬಾಕಿ ಇರುವ ಬಾಂಡ್‌ಗಳ ಸಂಖ್ಯೆ ಎಷ್ಟು? (ವಿವರ ನೀಡುವುದು)

ಶ್ರೀ ಕಳಶಪ್ಪ ಜಿ. ಬಂಡಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :

ಅ) 2266 ಬಾಂಡ್‌ಗಳನ್ನು ನೀಡಬೇಕಾಗಿರುತ್ತದೆ.

ವಿಧಾನಸಭಾ ಕ್ಷೇತ್ರವಾರು ವಿವರ ಈ ಕೆಳಕಂಡಂತಿದೆ.

ವಿಧಾನ ಸಭಾ ಕ್ಷೇತ್ರ	ನೀಡಬೇಕಾಗಿರುವ ಬಾಂಡ್‌ಗಳ ಸಂಖ್ಯೆ
ಬೀದರ್ ಉತ್ತರ	300
ಬೀದರ್ ದಕ್ಷಿಣ	179
ಹುಮ್ನಾಬಾದ್	525
ಬಸವಕಲ್ಯಾಣ	583
ಭಾಲ್ಕಿ	644
ಸಂತಪುರ	35
ಒಟ್ಟು	**2266**

ಆ) ಅನುದಾನದ ಲಭ್ಯತೆಗನುಗುಣವಾಗಿ ಬಾಂಡ್‌ಗಳನ್ನು ಮುದ್ರಿಸಿ ವಿತರಿಸಲು ಕ್ರಮ ಕೈಗೊಳ್ಳಲಾಗುವುದು.

ಇ) ಮೇಲಿನಂತೆ.

ಈ) ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಬಾಕಿ ಇರುವ ಬಾಂಡ್‌ಗಳ ಸಂಖ್ಯೆ: 179

ಕುಂದಗೋಳ ಮತಕ್ಷೇತ್ರದಲ್ಲಿ ಹೊಸದಾಗಿ ಪ್ರೌಢಶಾಲೆ ಪ್ರಾರಂಭ

206 (720) ಶ್ರೀ ಚಿಕ್ಕನಗೌಡ್ರ ಸಿದ್ದನಗೌಡ ಈಶ್ವರಗೌಡ (ಕುಂದಗೋಳ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಕುಂದಗೋಳ ಮತಕ್ಷೇತ್ರ ವ್ಯಾಪ್ತಿಯಲ್ಲಿ ಹೊಸದಾಗಿ ಸರ್ಕಾರಿ ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜು ಪ್ರಾರಂಭಿಸುವ ಕೋರಿಕೆ ಬಂದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;